ಡಿ-72-69

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.

## ವಿಷಯ

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಪ್ರಾರಂಭಗೊಂಡಿದ್ದು, ಒಟ್ಟು-14183 ಅತಿಥಿ ಉಪನ್ಯಾಸಕರ ಪೈಕಿ ಶೇಕಡ 50 ರಷ್ಟು (7091) ಮಾತ್ರ ಆಯ್ಕೆ ಮಾಡಿಕೊಳ್ಳಲು ಅನುಮತಿ ನೀಡಿರುವುದು ಹಾಗೂ ಇವರಿಗೆ ಸೆಪ್ಟೆಂಬರ್ 2020 ರಿಂದ ಜನವರಿ 2021 ರವರೆಗೆ 5 ತಿಂಗಳುಗಳ ಗೌರವಧನವನ್ನು ಬಿಡುಗಡೆಗೊಳಿಸದೆ ಇರುವುದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಡ್ಡಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ

ಸರ್ಕಾರದ ಆದೇಶ ಸಂಖ್ಯೆ: ಇಡಿ 49 ಹೆಚ್‌ಪಿಸಿ 2019, ದಿನಾಂಕ: 11.05.2020 ರಲ್ಲಿ 2020-21ನೇ ಸಾಲಿನ ಅತಿಥಿ ಉಪನ್ಯಾಸಕರ ನೇಮಕವನ್ನು ಆರ್ಥಿಕ ಇಲಾಖೆಯ ಸಹಮತಿ ಪಡೆದ ನಂತರವೇ ಮಾಡುವಂತೆ ಆದೇಶಿಸಲಾಗಿದೆ. ಅದರಂತೆ, 2020-21ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಒಟ್ಟು 14183 ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿ, ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/424/ವೆಚ್ಚ-8/2020, ದಿನಾಂಕ:18.01.2021ರಲ್ಲಿ ಈಗಾಗಲೇ ಕಾಲೇಜುಗಳು ಪ್ರಾರಂಭಗೊಂಡಿರುವುದರಿಂದ 14183 ಅತಿಥಿ ಉಪನ್ಯಾಸಕರ ಪೈಕಿ ಶೇಕಡ 50ರಷ್ಟು (7091) ಅತಿಥಿ ಉಪನ್ಯಾಸಕರನ್ನು ಮಾತ್ರ ತುರ್ತಾಗಿ ಆಯ್ಕೆ ಮಾಡಿಕೊಳ್ಳಲು ಸಹಮತಿ ನೀಡಿರುತ್ತದೆ. ಅದರಂತೆ, ಕಾಲೇಜು ಶಿಕ್ಷಣ ಆಯುಕ್ತಾಲಯದ ಸುತ್ತೋಲೆ ಸಂಖ್ಯೆ: ಕಾಶಿಇ/ನೇವಿ-1/ಅಉಆ/19/2019-20, ದಿನಾಂಕ: 19.01.2021 ಮತ್ತು 21.01.2021 ರಲ್ಲಿ ಒಟ್ಟು 7091 ಅತಿಥಿ ಉಪನ್ಯಾಸಕರನ್ನು ತುರ್ತಾಗಿ ಆಯ್ಕೆ ಮಾಡಿಕೊಳ್ಳೊಲು ಕೆಲವು ಷರತ್ತು/ನಿಬಂಧನೆಗಳಿಗೊಳಪಟ್ಟು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ.

ಮುಂದುವರೆದು, 2020-21ನೇ ಶೈಕ್ಷಣಿಕ ಸಾಲಿನ ತರಗತಿಗಳು ನವೆಂಬರ್ 2020 ರಿಂದ ಪ್ರಾರಂಭಗೊಂಡಿದ್ದು, ಕಾಲೇಜುಗಳಲ್ಲಿನ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಅವಶ್ಯವಿರುವ 14183 ಅತಿಥಿ ಉಪನ್ಯಾಸಕರನ್ನು ನೇಮಕಮಾಡಿಕೊಳ್ಳದೇ ಇರುವುದರಿಂದ ದೈನಂದಿನ ತರಗತಿಗಳನ್ನು ನಿಯಮಿತವಾಗಿ ನಡೆಸಲು ತೊಂದರೆಯಾಗಿರುತ್ತದೆ. ಫೆಬ್ರವರಿ/ಮಾರ್ಚ್ ತಿಂಗಳಲ್ಲಿ ಪದವಿ ಪರೀಕ್ಷೆಗಳು ನಡೆಯಲಿದ್ದು ತುರ್ತಾಗಿ ಪಠ್ಯಕ್ರಮಗಳನ್ನು ಪೂರ್ಣಗೊಳಿಸುವ ಅವಶ್ಯಕತೆ ಇರುತ್ತದೆ. ಆದ್ದರಿಂದ, ಸರ್ಕಾರಿ ಕಾಲೇಜುಗಳಲ್ಲಿನ ದೈನಂದಿನ ಪಾಠ - ಪ್ರವಚನಗಳನ್ನು ನಡೆಸಲು ಪ್ರಸ್ತುತ ಅನುಮತಿ ನೀಡಿರುವ 7091 ಅತಿಥಿ ಉಪನ್ಯಾಸಕರ ಜೊತೆಗೆ ಉಳಿದ 7092 ಅತಿಥಿ

ಉಪನ್ಯಾಸಕರನ್ನು ನೇಮಿಸಿಕೊಳ್ಳಲು ತುರ್ತಾಗಿ ಅನುಮತಿ ನೀಡಲು ಹಾಗೂ 2020-21ನೇ ಸಾಲಿಗೆ ಅವಶ್ಯವಿರುವ ಅನುದಾನದ ವಿವರಗಳನ್ನು ಮತ್ತು ಆರ್ಥಿಕ ಇಲಾಖೆಯು ಕೋರಿರುವ ಮಾಹಿತಿಯೊಂದಿಗೆ ಮತ್ತೊಮ್ಮೆ ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತ ಕೂಡಲೇ ಬಾಕಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಕ್ರಮಕೈಗೊಳ್ಳಲಾಗುವುದು.

ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿಸುವುದಕ್ಕೆ ಸಂಬಂಧಿಸಿದಂತೆ, ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರುಗಳಿಗೆ ಮಾರ್ಚ್ 2020 ರಿಂದ ಜುಲೈ 2020 ರವರೆಗೆ 5 ತಿಂಗಳ ಅವಧಿಗೆ ಕರ್ತವ್ಯದ ಅವಧಿ ಮತ್ತು ವಿಶೇಷ ಪ್ರಕರಣವೆಂದು ಪರಿಗಣಿಸಿ, ಸದರಿ ಅವಧಿಗೆ ಒಟ್ಟು ರೂ.85,91,77,857-00ಗಳನ್ನು ಪಾವತಿಸಲು ಅನುಮತಿ ನೀಡಿ, ಆದೇಶಿಸಿದ್ದು, ಅದರಂತೆ, ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿಸಲಾಗಿರುತ್ತದೆ.

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಇಡಿ 41 ಡಿಸಿಇ 2021